ಶ್ರೀ ಶಿವರಾಮ ಕಾರಂತ ಬಡಾವಣೆಯ ನಿರ್ಮಾಣ

615 (1025) **ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ):-** ಮಾನ್ಯ ಮುಖ್ಯಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಬೆಂಗಳೂರು ಉತ್ತರ ತಾಲ್ಲೂಕಿನ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರತಿಷ್ಠಿತ ಶ್ರೀ ಶಿವರಾಮಕಾರಂತ ಬಡಾವಣೆ ನಿರ್ಮಾಣವನ್ನು ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಈ ಬಡಾವಣೆಯನ್ನು ನಿರ್ಮಾಣ ಮಾಡಲು ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಇ) ಈ ಬಡಾವಣೆ ನಿರ್ಮಾಣವನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

(ಈ) ಹಾಗಿಲ್ಲದಿದ್ದಲ್ಲಿ, ಕಾರಣವೇನು ?

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಯವರು):-

(ಅ) ಡಾ॥ ಕೆ. ಶಿವರಾಮ ಕಾರಂತ ಬಡಾವಣೆಗಾಗಿ ಪ್ರಾಥಮಿಕ ಅಧಿಸೂಚನೆ ಸಂಖ್ಯೆ: BDA/COMMR/DL/(LA)/SALO/A5/283/2008-2009, ದಿನಾಂಕ 30.12.2008 ರಂದು ಹೊರಡಿಸಲಾಗಿದ್ದು, ಅಂತಿಮ ಅಧಿಸೂಚನೆ ಹೊರಡಿಸುವ ಪ್ರಕ್ರಿಯೆಯು ಪರಿಶೀಲನೆಯಲ್ಲಿರುತ್ತದೆ.

(ಆ) ಡಾ॥ ಕೆ. ಶಿವರಾಮ ಕಾರಂತ ಬಡಾವಣೆಗಾಗಿ ದಿನಾಂಕ: 30/12/2008 ರಂದು 3546-12 (ಎ-ಗುಂ) ಜಮೀನಿಗೆ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

(ಇ) ಇಲ್ಲ.

(ಈ) ಉದ್ಭವಿಸುವುದಿಲ್ಲ.

ಕುಡಿಯುವ ನೀರಿನ ಸಮಸ್ಯೆ

497 (925) **ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಿಕೇಶಿ ನಗರ):-** ಮಾನ್ಯ ಮುಖ್ಯಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ 7 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಯವರು):-

(ಅ) ಗಮನಕ್ಕೆ ಬಂದಿದೆ.

(ಆ) ಪುಲಿಕೇಶಿ ನಗರ ವಿಧಾನಸಭಾ ಕ್ಷೇತ್ರದ 7 ವಾರ್ಡ್‌ಗಳಲ್ಲಿ ಅಂದಾಜು ಒಟ್ಟು 27,500 ಕಟ್ಟಡಗಳು ಇರುತ್ತದೆ. ಇವುಗಳಲ್ಲಿ 18,400 ಕಟ್ಟಡಕ್ಕೆ ನೀರಿನ ಸಂಪರ್ಕವನ್ನು ಮಂಜೂರಾತಿ ಆಗಿದ್ದು, ವಾರಕ್ಕೆ ಎರಡು ಬಾರಿ ನೀರು ಸರಬರಾಜು ಮಾಡಲಾಗುತ್ತಿರುತ್ತದೆ. ಈ ಪ್ರದೇಶದ ಕೆಲವೊಂದು ಭಾಗದಲ್ಲಿ ವಾರಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿರುತ್ತದೆ.

ಪ್ರತಿ ನೀರಿನ ಸಂಪರ್ಕಕ್ಕೆ ಮಾಹೆಯಾನ ಕನಿಷ್ಠ 15,000 ರಿಂದ 18,000 ಲೀಟರ್ ನೀರು ಸರಬರಾಜು ಮಾಡಲಾಗುತ್ತಿದೆ. ಈ ಪ್ರದೇಶದಲ್ಲಿ ಸುಮಾರು 188 ಸಾರ್ವಜನಿಕ ಕೊಳಾಯಿ (Public Fountain) ಗಳಿಂದಲೂ ಸಹ ಕಾವೇರಿ ನೀರು ಸರಬರಾಜು ಮಾಡಲಾಗುತ್ತಿದೆ. ಇವುಗಳ ಜೊತೆಗೆ 105 ಕೊಳವೆ ಬಾವಿಗಳಿದ್ದು ಅವುಗಳಿಂದಲೂ ಸಹ ನೀರು ಸರಬರಾಜು ಮಾಡಲಾಗುತ್ತಿದೆ. ತೀವ್ರ ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ, ಸಾರ್ವಜನಿಕರ ದೂರುಗಳನ್ನು ಸ್ವಂದಿಸಿ, ಜಲಮಂಡಳಿಯ 4 ನೀರಿನ ವಾಹನಗಳ (Water Tankers lorries) ಮುಖಾಂತರ ನೀರು ಸರಬರಾಜು ಮಾಡಲಾಗುತ್ತಿದೆ.

ಪುಲಿಕೇಶಿ ನಗರ ವಿಧಾನಸಭಾ ಕ್ಷೇತ್ರದಲ್ಲಿ ಉಳಿದಿರುವ ಅಂದರೆ (27,500–18,400) = 9,100 ಮನೆಗಳಿಗೆ ನೀರಿನ ಸಮಸ್ಯೆಯನ್ನು ಬಗೆಹರಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

ಕಾವೇರಿ ನೀರು ಸರಬರಾಜು

563 (745) **ಶ್ರೀ ಮುನಿರಾಜು ಎಸ್. (ದಾಸರಹಳ್ಳಿ):-** ಮಾನ್ಯ ಮುಖ್ಯಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ:-

(ಅ) ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಕಾವೇರಿಯ ನೀರನ್ನು ಕ್ಷೇತ್ರ ವ್ಯಾಪ್ತಿಯಲ್ಲಿ ಸರಬರಾಜು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇನ್ನು ಎಷ್ಟು ದಿನಗಳಲ್ಲಿ ಕಾವೇರಿ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು ?